## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- 2021-22ನೇ ಸಾಲಿನಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ ಆಯವ್ಯಯದಲ್ಲಿ ನೀಡಿರುವ ಅನುದಾನದಲ್ಲಿ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ:-

1. ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ:ಎಫ್‌ಡಿ 01 ಟಿಎಫ್‌ಪಿ/2021, ದಿನಾಂಕ: 05.04 .2021.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪತ್ರ ಸಂಖ್ಯೆ: ಹಿಂವಕನಿ/ಲೆಶಾ-2/ಸಿಆರ್-1/2021-22 ದಿನಾಂಕ:20 .04.2021.
3. ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 339 ಬಿಎಂಎಸ್ 2021, ಬೆಂಗಳೂರು, ದಿನಾಂಕ:22.04.2021.
4. ಪ್ರಸ್ತಾವನೆ ಸಂಖ್ಯೆ:ಕ್ರಾವೀ.ಸಂ.ರಾ.ಕ್ಷೇ.ಅ.ಪ್ರಾ/ಸಿಆರ್-01/2021-22 ದಿನಾಂಕ:14.06.2021

ಪ್ರಸ್ತಾವನೆ:-

ಮೇಲೆ ಓದಲಾದ ಮೇಲೆ ಕ್ರಮ ಸಂಖ್ಯೆ (1)ರ ಆರ್ಥಿಕ ಇಲಾಖೆಯ ಆದೇಶದಲ್ಲಿ 2021-22ನೇ ಸಾಲಿನಲ್ಲಿ ಮೊದಲನೇ ಮತ್ತು ಎರಡನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರದ ಕಾರ್ಯದರ್ಶಿ ಹಾಗೂ ಪ್ರಧಾನ ಕಾರ್ಯದರ್ಶಿಯವರಿಗೆ ಅಧಿಕಾರ ಪ್ರತ್ಯಾಯೋಜಿಸಿ ಆದೇಶಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು 2021-22ನೇ ಸಾಲಿನ ಆಯವ್ಯಯದಲ್ಲಿ ಇಲಾಖೆಯ ವಿವಿಧ ಯೋಜನೆಯಡಿ ಒದಗಿಸಿರುವ ಅನುದಾನದಲ್ಲಿ, ಮೊದಲನೇ ತ್ರೈಮಾಸಿಕ ಕಂತಿನ ಅನುದಾನವನ್ನು ಬಿಡುಗಡೆ ಮಾಡುವಂತೆ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರಲ್ಲಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ರವರಿಗೆ ಮೊದಲನೇ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆಯಾಗಿದ್ದು, ಸದರಿ ಆದೇಶದ ಕ್ರಮ ಸಂಖ್ಯೆ:3ರಲ್ಲಿ ದೇವರಾಜ ಅರಸು ಸಂಶೋಧನಾ ಸಂಸ್ಥೆ ಇತರೆ ಕಾರ್ಯಕ್ರಮಗಳು ಲೆಕ್ಕಶೀರ್ಷಿಕೆ:2225-03-277-02-08 ಆಬ್ಜೆಕ್ಟೀವ್ ಕೋಡ್ 059ರಡಿ ಇತರೆ ವೆಚ್ಚಗಳಡಿ ಲಭ್ಯವಿರುವ ಅನುದಾನವನ್ನು ಬಿಡುಗಡೆ ಮಾಡಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ:(4)ರಲ್ಲಿ ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಇವರ ವತಿಯಿಂದ 2020-21ನೇ ಸಾಲಿನ ಮುಂದುವರೆದ ಕಾಮಗಾರಿಗಳನ್ನು ಮಾತ್ರ ಅನುಷ್ಠಾನಗೊಳಿಸುತ್ತಿರುವುದರಿಂದ 2021-22ನೇ ಸಾಲಿಗೆ ಯಾವುದೇ ಹೊಸ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೇ ಇರುವ ಪ್ರಯುಕ್ತ 2021-22ನೇ ಸಾಲಿನ ಆಯವ್ಯಯದಲ್ಲಿ ಪ್ರಾಧಿಕಾರಕ್ಕೆ ಒದಗಿಸಿರುವ ಅನುದಾನ ರೂ.6500.00 ಲಕ್ಷಗಳ ಪೈಕಿ ಮೊದಲನೇ ಮತ್ತು ಎರಡನೇ ಕಂತಿನ ಅನುದಾನ ರೂ.3250.00 ಲಕ್ಷಗಳ ಅನುದಾನವನ್ನು ಮಂಜೂರು ಮಾಡುವಂತೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

### ಸರ್ಕಾರದ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 339 ಬಿಎಂಎಸ್ 2021, ಬೆಂಗಳೂರು, ದಿನಾಂಕ:17-06-2021.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಹಾಗೂ ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ

ಅಭಿವೃದ್ಧಿ ಪ್ರಾಧಿಕಾರ ಇವರು ಅನುಷ್ಠಾನಗೊಳಿಸುತ್ತಿರುವ ಈ ಕೆಳಕಂಡ ವಿವಿಧ ಯೋಜನೆಗಳಿಗೆ 2021-22ನೇ ಸಾಲಿಗೆ ಮಂಜೂರಾಗಿರುವ ಆಯವ್ಯಯದಲ್ಲಿ ಮೊದಲನೇ ತ್ರೈಮಾಸಿಕ ಕಂತಾಗಿ ಶೇ.25% ರಷ್ಟು ಅನುದಾನವನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಕಾರ್ಯಕ್ರಮ/ಲೆಕ್ಕಶೀರ್ಷಿಕೆ | 2021-22ನೇ ಸಾಲಿಗೆ ಒದಗಿಸಿರುವ ಆಯವ್ಯಯ | ಮೊದಲನೇ ತ್ರೈಮಾಸಿಕದಲ್ಲಿ ಬಿಡುಗಡೆ ಮಾಡಿರುವ ಮೊತ್ತ |
|---|---|---|---|
| 1 | ಇತರೆ ಕಾರ್ಯಕ್ರಮಗಳು ಲೆಕ್ಕಶೀರ್ಷಿಕೆ-2225-03-277-02-08 ಅಬ್ಜೆಕ್ಟಿವ್ ಕೋಡ್(059) | 70.00 ಲಕ್ಷ | 17.50 |
| 2 | ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರತಿಷ್ಠಾನ ಲೆಕ್ಕಶೀರ್ಷಿಕೆ-2225-03-190-0-06 ಅಬ್ಜೆಕ್ಟಿವ್ ಕೋಡ್(059) | 6500.00 ಲಕ್ಷ | 1625.00 |

<u>ಷರತ್ತುಗಳು:-</u>

1. 2021-22ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದ ಹಣ ಬಳಕೆ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಯೋಜನೆಯ ಉಸ್ತುವಾರಿಗಾಗಿ ಖರ್ಚು ಮಾಡಿದ ಬಗ್ಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಅನುದಾನದ ಕೋರಿಕೆ ಪ್ರಸ್ತಾವನೆಯೊಂದಿಗೆ ಕಡ್ಡಾಯವಾಗಿ ಸಲ್ಲಿಸತಕ್ಕದ್ದು.
2. ಸರ್ಕಾರದ ಆದೇಶದಲ್ಲಿ ವಿವಿಧ ಯೋಜನೆಗಳಿಗೆ ಮಂಜೂರು ಮಾಡಿರುವ ಅನುದಾನ ಬಿಡುಗಡೆ ಕುರಿತಂತೆ ಕಾಲಕಾಲಕ್ಕೆ ಹೊರಡಿಸಲಾಗಿರುವ ಮಾರ್ಗಸೂಚಿಗಳನ್ವಯ ನಿಯಮಾನುಸಾರ ಕ್ರಮವಹಿಸತಕ್ಕದ್ದು.
3. ಕಾಂತ್ರಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ರವರು ಹಣವನ್ನು ಡ್ರಾ ಮಾಡಲು ಸಲ್ಲಿಸುವ ಸಂಬಂಧಿಸಿದ ಲೆಕ್ಕಶೀರ್ಷಿಕೆವಾರು ಸ್ವೀಕರ್ತನ ರಶೀದಿ ಬಿಲ್ಲುಗಳೀಗೆ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರವರ ಮೇಲು ರುಜು ಪಡೆದು ಹಣ ಡ್ರಾ ಮಾಡತಕ್ಕದ್ದು.
4. ಯೋಜನಾವಾರು ಅನುದಾನ ಬಿಡುಗಡೆ ಮತ್ತು ಬಳಕೆಗೆ ಸಂಬಂಧಿಸಿದಂತೆ ಕಾಮಗಾರಿವಾರು/ತಾಲ್ಲೂಕುವಾರು/ ಜಿಲ್ಲಾವಾರು ವಿವರಗಳನ್ನು ಆಯುಕ್ತಾಲಯದ ಜಾಲತಾಣದಲ್ಲಿ ಕಡ್ಡಾವಾಗಿ ಅಪ್‌ಲೋಡ್ ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ::ಎಫ್‌ಡಿ 01 ಟಿಎಫ್‌ಪಿ 2021, ದಿನಾಂಕ:05.04.2021 ರಲ್ಲಿ ಇಲಾಖಾ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕದ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenpaneen 17/06/2021

**(ಷಾಹೀನ್ ಪರ್ವೀನ್.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

<u>ಇವರಿಗೆ:-</u>

1. ಪ್ರಧಾನ ಮಹಾಲೇಖಪಾಲರು,(ಎ ಮತ್ತು ಇ), ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ3&9), ವಿಧಾನಸೌಧ.

3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರ ಬೆಂಗಳೂರು.
5. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರು ಖಜಾನೆ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮಾನ್ಯೇಜ್‌ಮೆಂಟ್ ಕೇಂದ್ರ 2ನೇ ಮಹಡಿ, ಸೌತ್ ಬ್ಲಾಕ್ ಖನಿಜ ಭವನ, ಬೆಂಗಳೂರು.

<u>ಪ್ರತಿ ಮಾಹಿತಿಗಾಗಿ:-</u>

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ.
2. ಸರ್ಕಾರದ ಅಪರ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ.
3. ಸರ್ಕಾರದ ಅಧೀನ ಕಾರ್ಯದರ್ಶಿ 1 & 2 ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********